ಸೇಡಂ ಕ್ಷೇತ್ರದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾಲಯಗಳಲ್ಲಿ ಸಿಬ್ಬಂದಿ ಇಲ್ಲದಿರುವುದು.

1487(2343)

ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಗುಲ್ಬರ್ಗಾ ಜಿಲ್ಲೆಯ ಸೇಡಂ ಕ್ಷೇತ್ರದಲ್ಲಿ ಒಟ್ಟು ಪ್ರಾಥಮಿಕ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು? ಈ ಪಶು ಚಿಕಿತ್ಸಾಲಯಗಳಲ್ಲಿ ಪಶು ವೈದ್ಯಕೀಯ ಪರಿವೀಕ್ಷಕರು ಅಥವಾ ಹಿರಿಯ ಪಶು ವೈದ್ಯಕೀಯ ಪರಿವೀಕ್ಷಕರು ಯಾವ ಸಿಬ್ಬಂದಿ ಸಹ ಇಲ್ಲದೇ ಬೀಗ ಹಾಕಿ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಇಂತಹ ಅವ್ಯವಸ್ಥೆಯ ಪ್ರಾಥಮಿಕ ಪಶು ಚಿಕಿತ್ಸಾಲಯಗಳಲ್ಲಿ ರೈತರ ಜಾನುವಾರುಗಳ ಚಿಕಿತ್ಸೆಗಾಗಿ ವ್ಯವಸ್ಥೆ ಮಾಡುವುದು ಎಂದು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

1) ಸೇಡಂ ಕ್ಷೇತ್ರದಲ್ಲಿ ಒಟ್ಟಾರೆ 15 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು ಇವೆ. ಎಲ್ಲಾ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳಿಗೆ ಇತ್ತೀಚೆಗೆ ಹಿರಿಯ ಪಶು ಪರೀಕ್ಷಕರನ್ನು ನೇಮಿಸಲಾಗಿದೆ.

2) ಉದ್ಭವಿಸುವುದಿಲ್ಲ.

ಸೇಡಂ ತಾಲ್ಲೂಕಿನ ಅರಣ್ಯ ಇಲಾಖೆಯಿಂದ ನೆಟ್ಟಿರುವ ಸಸಿಗಳು.

1488 (2274)

ಶ್ರೀ ಬಸವಂತರೆಡ್ಡಿ ಮೋತಕ ಪಲ್ಲಿ (ಸೇಡಂ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಇಟ್ಕಾಲ್, ಗಾಡದಾನಿ, ವೆಂಕಟಾಪುರ, ತುಮ್ಮಕುಂಟಾ, ಮುಧೋಳ, ಬೊಂದೆಂಪಲ್ಲಿ ಮತ್ತು ಇತರ ಗ್ರಾಮಗಳಲ್ಲಿ ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಸಸಿಗಳನ್ನು ನೆಡಲು ತಗುಲಿರುವ ಖರ್ಚು ಎಷ್ಟು? ಗ್ರಾಮವಾರು: ಸರ್ವೆ ನಂಬರುವಾರು: ವರ್ಷವಾರು: (ಕಳೆದ 3 ವರ್ಷಗಳಿಂದ ವಿವರ ನೀಡುವುದು)